**ಗಂಗಾಂಬಿಕೆ**
ಮಹಾಪೌರರು

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ,
ನರಸಿಂಹರಾಜ ವೃತ್ತ, ಬೆಂಗಳೂರು – 560 002
ಕಛೇರಿ : 080-22238540, 22248366,
22975501, ಫ್ಯಾಕ್ಸ್ : 080-22237457
E-mail : mayorbengaluru@gmail.com


ಸಂಖ್ಯೆ:ಎಂ.ಪಿ.ಎಸ್/ಪಿಆರ್/744/2019-20 ದಿನಾಂಕ:05-07-2019

ಪ್ರಾಂಶುಪಾಲರು,
ಬೆಂಗಳೂರು ನಗರದ ಎಲ್ಲಾ ಶಾಲೆಗಳು,
ಬೆಂಗಳೂರು.

## ಮನವಿ

ನಮ್ಮ ಪೂರ್ವಜರು ಪ್ರಕೃತಿಯನ್ನು ದೈವವೆಂದು ಪೂಜಿಸಿ ರಕ್ಷಿಸುತ್ತಿದ್ದರು. ಆದರೆ ಅಭಿವೃದ್ಧಿ ಪಥದಲ್ಲಿ ಮನುಷ್ಯ ಮುಂದುವರೆದಂತೆ ತನ್ನ ವೈಯಕ್ತಿಕ ಪ್ರಯೋಜನಕ್ಕಾಗಿ ಪರಿಸರದ ಮೇಲೆ ನಿರಂತರ ದಾಳಿ ನಡೆಸುತ್ತಿರುತ್ತಾನೆ. ಇಂಥ ಪರಿಸ್ಥಿತಿ ಹೀಗೆ ಮುಂದುವರೆದರೆ ಪ್ರಕೃತಿ, ಮನುಷ್ಯ ಮತ್ತು ಪ್ರಾಣಿಗಳ ಆರೋಗ್ಯದ ಮೇಲೆ ಕೆಟ್ಟ ಪರಿಣಾಮ ಬೀರುವುದರಲ್ಲಿ ಅನುಮಾನವೇ ಇಲ್ಲ. ಇದನ್ನು ತಡೆಗಟ್ಟಲು ಪರಿಸರದ ಸಂರಕ್ಷಣೆ ಬಗ್ಗೆ ಕಾಳಜಿ ಮೂಡಿಸಿ, ಅಳವಡಿಸಿಕೊಳ್ಳುವುದು ನಮ್ಮೆಲ್ಲರ ಕರ್ತವ್ಯ.

ಬೆಂಗಳೂರು ನಗರದಲ್ಲಿ ಜನಸಂಖ್ಯೆ ಹೆಚ್ಚಾಗುತ್ತಿದ್ದು, ಇದರಿಂದ ಪ್ಲಾಸ್ಟಿಕ್ ಬಳಕೆಯು ಸಹ ಹೆಚ್ಚಾಗುತ್ತಿರುತ್ತದೆ. ಸರ್ಕಾರವು ಈಗಾಗಲೇ ದೇಶವ್ಯಾಪ್ತಿ ಪ್ಲಾಸ್ಟಿಕ್ ಬಳಕೆ ನಿಷೇಧಿಸಿ ಆದೇಶ ಹೊರಡಿಸಿದ್ದರೂ ಸಹ ಪ್ಲಾಸ್ಟಿಕ್ ಬಳಕೆ ಇನ್ನೂ ನಿಂತಿರುವುದಿಲ್ಲ. ಇದು ಸಾಕಾರಗೊಳ್ಳಬೇಕೆಂದರೆ, ಸಾರ್ವಜನಿಕರು ಸ್ವಯಂ ಪ್ರೇರಿತವಾಗಿ ದೈನಂದಿನ ಕಾರ್ಯಗಳಲ್ಲಿ ಪ್ಲಾಸ್ಟಿಕ್ ಬಳಕೆ ಮಾಡುವುದನ್ನು ನಿಲ್ಲಿಸಬೇಕಿರುತ್ತದೆ.

ಬೆಳೆಯುವ ಸಿರಿ ಮೊಳಕೆಯಲ್ಲಿ ಎಂಬ ಗಾದೆಯಂತೆ ಮಕ್ಕಳಿಗೆ ನಾವು ಬಾಲ್ಯದಲ್ಲಿಯೇ ಪರಿಸರದ ಬಗ್ಗೆ ಕಾಳಜಿಯನ್ನು ಬೆಳೆಸಿದಲ್ಲಿ ಮುಂಬರುವ ಪೀಳಿಗೆಗೆ ಉತ್ತಮ ಪರಿಸರವನ್ನು ನೀಡಬಹುದಾಗಿರುತ್ತದೆ. ಮಕ್ಕಳಲ್ಲಿ ಪರಿಸರ ಕಾಳಜಿ ಮೂಡಿಸಲು ಶಾಲೆಗಳು ಉತ್ತಮ ವೇದಿಕೆಯಾಗಿರುತ್ತದೆ. ನಗರದ ಎಲ್ಲಾ ಶಾಲೆಗಳಲ್ಲಿ ಪ್ರತಿದಿನ ಪ್ರಾರ್ಥನೆ ಸಮಯದಲ್ಲಿ ಮಕ್ಕಳಿಗೆ ಪ್ಲಾಸ್ಟಿಕ್ ಬಳಸುವುದರಿಂದ ಪ್ರಕೃತಿ, ಮನುಷ್ಯ ಮತ್ತು ಪ್ರಾಣಿಗಳ ಮೇಲೆ ಆಗುತ್ತಿರುವ ದುಷ್ಪರಿಣಾಮಗಳ ಬಗ್ಗೆ ಅರಿವು ಮೂಡಿಸಿ, ಪ್ಲಾಸ್ಟಿಕ್ ಬಳಕೆಯನ್ನು ನಿಷೇಧಿಸುವಂತೆ ತಿಳಿ ಹೇಳುವುದರಿಂದ ಪ್ರಕೃತಿಯನ್ನು ಸಂರಕ್ಷಿಸಿ ಮುಂದಿನ ಪೀಳಿಗೆಗೆ ಉತ್ತಮ ಪರಿಸರ ನೀಡಲು ಸಹಕಾರಿಯಾಗುತ್ತದೆ. ಅಲ್ಲದೇ ಮಕ್ಕಳ ಪರಿಸರ ಕಾಳಜಿಯನ್ನು ಗಮನಿಸಿ ತಮ್ಮ ಮನೆಗಳಲ್ಲಿ ಹಿರಿಯರೂ ಸಹ ಪರಿಸರ ಕಾಳಜಿ ಬೆಳೆಸಿಕೊಳ್ಳುವ ಸಂಭವವಿರುತ್ತದೆ.

**ಗಂಗಾಂಬಿಕೆ**
ಮಹಾಪೌರರು

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ,
ನರಸಿಂಹರಾಜ ವೃತ್ತ, ಬೆಂಗಳೂರು – 560 002
ದೂರವಾಣಿ : 080–22238540, 22248366,
22975501, ಫ್ಯಾಕ್ಸ್ : 080–22237457
E-mail : mayorbengaluru@gmail.com




ಇದೇ ರೀತಿಯಲ್ಲಿ ಇಂದು ಪ್ರಪಂಚದಾದ್ಯಂತ ಅತ್ಯಂತ ಚರ್ಚೆಗೆ ಗ್ರಾಸವಾಗುತ್ತಿರುವ ವಿಷಯ ನೀರಿನ ಸಂರಕ್ಷಣೆ. ಕಾಲಕಾಲಕ್ಕೆ ಸರಿಯಾಗಿ ಮಳೆಯಾಗದೇ, ಕೆರೆ ಕಾಲುವೆಗಳು ಭರ್ತಿಯಾಗದೇ ಜನರು ನೀರಿನ ಹಾಹಾಕಾರ ಎದುರಿಸುತ್ತಿರುವುದು ನಾವು ಗಮನಿಸುತ್ತಿದ್ದೇವೆ. ಸಮೀಕ್ಷೆಯ ಪ್ರಕಾರ 2030ರ ವೇಳೆಗೆ ಭೂಮಿಯಲ್ಲಿ ಕುಡಿಯುವ ನೀರಿನ ಬವಣೆ ತೀವ್ರಗೊಳ್ಳಲಿದೆ. ಆದ್ದರಿಂದ ನೀರಿನ ಸಂರಕ್ಷಣೆಯ ಬಗ್ಗೆ ಜಾಗೃತಿ ಮೂಡಿಸಿ ನೀರಿನ ಸರಿಯಾದ ನಿರ್ವಹಣೆ ಮಾಡಿದರೆ ಮುಂದಿನ ತಲೆಮಾರಿಗೆ ಹಿತವಾಗುತ್ತದೆ.

ಆದ್ದರಿಂದ ತಮ್ಮ ಶಾಲೆಯಲ್ಲಿ ಪ್ರತಿದಿನ ಪ್ರಾರ್ಥನೆ ಸಮಯದಲ್ಲಿ 2 ನಿಮಿಷ ಸಮಯ ಮೀಸಲಿಟ್ಟು ಮಕ್ಕಳಲ್ಲಿ ಪರಿಸರ ಪ್ರಜ್ಞೆ ಮೂಡಿಸಿ, ಪರಿಸರ ಸಂರಕ್ಷಣೆ ಬಗ್ಗೆ, ಪ್ಲಾಸ್ಟಿಕ್ ಬಳಕೆಯನ್ನು ನಿಷೇಧಿಸಲು ಮತ್ತು ಗಣೇಶ ಹಬ್ಬ ಹತ್ತಿರ ಬರುತ್ತಿರುವುದರಿಂದ ಪಿ.ಓ.ಪಿ ಬದಲಾಗಿ ಮಣ್ಣಿನಿಂದ ಮಾಡಿರುವ ಮೂರ್ತಿಗಳನ್ನು ಮಾತ್ರ ಉಪಯೋಗಿಸುವಂತೆ ಅರಿವು ಮೂಡಿಸಿ ಪರಿಸರದ ಸಂರಕ್ಷಣೆ ಮಾಡಲು ಮತ್ತು ನೀರಿನ ಸಂರಕ್ಷಣೆಯ ಬಗ್ಗೆ ಮಕ್ಕಳಲ್ಲಿ ಜಾಗೃತಿ ಮೂಡಿಸಿ ಅನಗತ್ಯವಾಗಿ ನೀರನ್ನು ಪೋಲು ಮಾಡದಂತೆ ಅರಿವು ಮೂಡಿಸಲು ಸಹಕರಿಸುವಂತೆ ವಿನಂತಿಸಿದೆ.

Gangambike
ಮಹಾಪೌರರು

ಸಾರ್ವಜನಿಕ ಸಂಪರ್ಕಾಧಿಕಾರಿ ರವರು, ಮೇಲ್ಕಂಡ ಮನವಿಯ ಪ್ರತಿಯನ್ನು ಎಲ್ಲಾ ದಿನ ಪತ್ರಿಕೆಗಳ ಮುಂದಿನ ಪುಟದಲ್ಲಿ ಮುದ್ರಿತವಾಗುವಂತೆ ಅಗತ್ಯ ಕ್ರಮ ತೆಗೆದುಕೊಳ್ಳಲು ಸೂಚಿಸಿದೆ.